ಕರ್ನಾಟಕ ಸರ್ಕಾರ

**ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು-03**

ಸಂಖ್ಯೆ:ಎಸ್1/ವಾ.ಪ/ವಾ.ಪ.ನ.ಬಗ್ಗೆ/09/2020-21 ದಿನಾಂಕ: 05.07.2021

**ಸುತ್ತೋಲೆ**

**ವಿಷಯ:** ಏಪ್ರಿಲ್/ಮೇ-2021 ರ ವಾಣಿಜ್ಯ ಪರೀಕ್ಷೆಯ ಪರಿಷ್ಕೃತ ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಂಡು ಅಭ್ಯರ್ಥಿಗಳಿಗೆ ವಿತರಿಸುವ ಬಗ್ಗೆ.

**ಉಲ್ಲೇಖ:** ಮಂಡಳಿ ಸುತ್ತೋಲೆ ಸಂಖ್ಯೆ: ಎಸ್1/ವಾ.ಪ/ಏಪ್ರಿಲ್/ಮೇ-2021/ಅಧಿ.ಜ್ಞಾಸುತ್ತೋಲೆ/38/2020-21 ದಿನಾಂಕ: 09.04.2021

******

ಏಪ್ರಿಲ್/ಮೇ 2021ರ ಮಾಹೆಯಲ್ಲಿ ನಡೆಯ ಬೇಕಾಗಿದ್ದ ವಾಣಿಜ್ಯ ಪರೀಕ್ಷೆಯ ಬೆರಳಚ್ಚು ಪರೀಕ್ಷೆಗಳನ್ನು ಮಾತ್ರ ನಡೆಸಲಾಗಿದ್ದು, ಕೋವಿಡ್-19 ಕಾರಣದಿಂದ ಮುಂದೂಡಲಾಗಿದ್ದ ಶೀಘ್ರಲಿಪಿ, ಬರವಣಿಗೆ ಹಾಗೂ ಮುದ್ರಣ ಪರೀಕ್ಷೆಗಳನ್ನು ದಿನಾಂಕ: 12.07.2021ರಿಂದ 26.07.2021ರವರೆಗೆ ನಡೆಸಲು ತೀರ್ಮಾನಿಸಲಾಗಿದೆ. ಈ ಬಗ್ಗೆ ಪರಿಷ್ಕೃತ ವೇಳಾಪಟ್ಟಿಯನ್ನು ಮಂಡಳಿಯ ಜಾಲತಾಣದಲ್ಲಿ ಪ್ರಕಟಿಸಲಾಗಿದೆ. ಈ ಸಂಬಂಧ ನಿಮ್ಮ ಸಂಸ್ಥೆಯಿಂದ ಹಾಜರಾಗುತ್ತಿರುವ ವಿದ್ಯಾರ್ಥಿಗಳ ಪ್ರವೇಶ ಪತ್ರಗಳನ್ನು ಮಂಡಳಿಯ ಜಾಲತಾಣದಲ್ಲಿ ಅಪ್‌ಲೋಡ್ ಮಾಡಲಾಗಿದೆ. ತಮ್ಮ ಸಂಸ್ಥೆಗೆ ಸಂಬಂಧಪಟ್ಟ ಅಭ್ಯರ್ಥಿಗಳ ಪ್ರವೇಶ ಪತ್ರಗಳನ್ನು ಮಂಡಳಿಯ ಜಾಲತಾಣದಲ್ಲಿ ಡೌನ್ ಲೋಡ್ ಮಾಡಿಕೊಂಡು ಮುದ್ರಿಸಿಕೊಳ್ಳುವುದು. ಹಾಗೂ ನಿಗಧಿಪಡಿಸಿದ ವೇಳಾಪಟ್ಟಿಯಂತೆ ಅಭ್ಯರ್ಥಿಗಳು ಪರೀಕ್ಷೆಗೆ ಹಾಜರಾಗುವಂತೆ ಕ್ರಮವಹಿಸುವುದು.

ಮಂಡಳಿಯ ಜಾಲತಾಣದಲ್ಲಿ ಲಭ್ಯವಿರುವ INSTITUTE LOGIN ಮೂಲಕ ನಿಮ್ಮ ಸಂಸ್ಥೆಗಳ ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಂಡು ಕೆಳಕಂಡ ಅಂಶಗಳನ್ನು ಪರಿಶೀಲಿಸಿ ಅಭ್ಯರ್ಥಿಗಳಿಗೆ ವಿತರಿಸುವುದು.

1. ಏಪ್ರಿಲ್/ಮೇ 2021ರ ವಾಣಿಜ್ಯ ಪರೀಕ್ಷೆಯ ಪರಿಷ್ಕೃತ ಪ್ರವೇಶ ಪತ್ರಗಳು ಮಂಡಳಿಯ ಜಾಲತಾಣ **https://sslc.karnataka.gov.in** ನಲ್ಲಿ ಲಭ್ಯವಿದೆ.
2. ಲಾಗಿನ್ ಆದ ನಂತರ ಮೊದಲು ಆಯಾ ಸಂಸ್ಥೆಯ ಪ್ರಾಂಶುಪಾಲರು ತಮ್ಮ ಸಂಸ್ಥೆಯ USER NAME ಮತ್ತು PASS WORD ಬಳಸಿ ಎಲ್ಲಾ ವಿದ್ಯಾರ್ಥಿಗಳ ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಂಡು ಪರಿಶೀಲಿಸಬೇಕು.
3. ತಮ್ಮ ಸಂಸ್ಥೆಯಿಂದ ನೊಂದಾಯಿಸಿದ ಅಭ್ಯರ್ಥಿಗಳ ಸಂಖ್ಯೆಗೆ ಅನುಸಾರ ತಮ್ಮ ಸಂಸ್ಥೆಯಲ್ಲಿ ಸ್ವೀಕೃತವಾದ ಪ್ರವೇಶ ಪತ್ರಗಳ ಸಂಖ್ಯೆಗಳು ಸರಿ ಹೊಂದುತ್ತಿವೆಯೇ? ಒಂದು ವೇಳೆ ಸರಿ ಹೊಂದದಿದ್ದಲ್ಲಿ ಯಾವ ಅಭ್ಯರ್ಥಿಯ ಪ್ರವೇಶ ಪತ್ರ ಬಂದಿಲ್ಲವೆಂಬುದನ್ನು ಖಚಿತಪಡಿಸಿಕೊಂಡು ಅಗತ್ಯ ಕ್ರಮಕ್ಕಾಗಿ ಸಮರ್ಥನೆಯೊಂದಿಗೆ/ದಾಖಲೆಗಳನ್ನು ಕಳುಹಿಸಿಕೊಡುವುದು.
4. ಯಾವುದೇ ಅಭ್ಯರ್ಥಿಯ ಭಾವಚಿತ್ರ ಬದಲಾವಣೆಗೆ ಸಂಬಂಧಿಸಿದಂತೆ, ಪರೀಕ್ಷೆಗೆ ಮುಂಚೆ ಮಾಡಲಾದ ಬದಲಾವಣೆಗಳನ್ನು ಮಾತ್ರ ಮಂಡಳಿಯು ಪರಿಗಣಿಸುತ್ತದೆ. ಕೇಂದ್ರ ನಾಮಪಟ್ಟಿಯಲ್ಲಿ ಯಾವುದೇ ಬದಲಾವಣೆಗಳನ್ನು ಮಾಡದೆ ಇದ್ದಲ್ಲಿ ನಾಮಪಟ್ಟಿಯಲ್ಲಿರುವ ಭಾವಚಿತ್ರದ ಅಭ್ಯರ್ಥಿಯೇ ನೈಜ ಅಭ್ಯರ್ಥಿ ಎಂದು ಪರಿಗಣಿಸಲಾಗುವುದು. ಪರೀಕ್ಷಾ ನಂತರದಲ್ಲಿ ಬರುವ ವಿದ್ಯಾರ್ಥಿಗಳ ಭಾವಚಿತ್ರ ಬದಲಾವಣೆ ಕುರಿತ ಯಾವುದೇ ಮನವಿಗಳನ್ನು ಮಂಡಳಿ ಪುರಸ್ಕರಿಸುವುದಿಲ್ಲ. ಇದಕ್ಕೆ ಸಂಬಂಧಿಸಿದ ಸಂಸ್ಥೆಯ ಪ್ರಾಂಶುಪಾಲರು ಹಾಗೂ ಪರೀಕ್ಷಾ ಕೇಂದ್ರದ ಅಧೀಕ್ಷಕರುಗಳೇ ನೇರ ಜವಾಬ್ದಾರರಾಗಿರುತ್ತಾರೆ. ಈ ರೀತಿಯಾದಲ್ಲಿ ಬದಲಿ ಅಭ್ಯರ್ಥಿ ಪರೀಕ್ಷೆ ಬರೆಯಲು ಸಹಕರಿಸಿ ಪರೀಕ್ಷಾ ಅವ್ಯವಹಾರದಲ್ಲಿ ಭಾಗಿಯಾಗಿರುತ್ತೀರೆಂದು ಪರಿಗಣಿಸಿ ಸಂಬಂಧಿಸಿದ ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರ ಮತ್ತು ಶಾಲಾ ಪ್ರಾಂಶುಪಾಲರ ಮೇಲೆ ಕೆ.ಸಿ.ಎಸ್.ಆರ್ (ಸಿ.ಸಿ.ಎ) ನಿಯಮ-1957 ಮತ್ತು 1983 ರ ಕರ್ನಾಟಕ ಶಿಕ್ಷಣ ಕಾಯ್ದೆ ಹಾಗೂ ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿಯ ಕಾಯ್ದೆ-1966 ರನ್ವಯ ಕ್ರಮ ಜರುಗಿಸಲಾಗುವುದು.

5. ಪ್ರವೇಶ ಪತ್ರದಲ್ಲಿ ನೀಡಲಾಗಿರುವ ಸೂಚನೆಗಳನ್ನು ಪಾಲಿಸಲು ಅಭ್ಯರ್ಥಿಗಳಿಗೆ ಅಗತ್ಯವಾದ ಮಾಹಿತಿಯನ್ನು ನೀಡುವುದು.
6. ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳು ಪ್ರವೇಶ ಪತ್ರದಲ್ಲಿ ಪರೀಕ್ಷೆಗೆ ಹಾಜರಾಗುವ ವಿಷಯದ ಮುಂದೆ ನಮೂದಿಸಿರುವ ವಿಷಯ ಸಂಕೇತದ ಬಗ್ಗೆ ಖಚಿತ ಪಡಿಸಿಕೊಳ್ಳುವುದು. ಈ ಸಂಬಂಧ ಶಾಲಾ ಪ್ರಾಂಶುಪಾಲರು ಅಭ್ಯರ್ಥಿಗಳಿಗೆ ಮಾಹಿತಿ ನೀಡುವುದು.
7. ಬೆರಳಚ್ಚು ಪರೀಕ್ಷೆಯ ಪ್ರಥಮ ಮತ್ತು ಪ್ರೌಢದರ್ಜೆ ಪರೀಕ್ಷೆಗಳು ಈಗಾಗಲೇ ಮುಕ್ತಾಯಗೊಂಡಿದ್ದು, ಪ್ರವೀಣ ದರ್ಜೆಯ ಬೆರಳಚ್ಚು ಪರೀಕ್ಷೆ, ಶೀಘ್ರಲಿಪಿ, ಬರವಣಿಗೆ ಹಾಗೂ ಮುದ್ರಣ ಪರೀಕ್ಷೆಗಳನ್ನು ನಡೆಸುವುದು ಬಾಕಿ ಇರುತ್ತದೆ. ಬಾಕಿ ಇರುವ ಪರೀಕ್ಷೆಗಳನ್ನು ಪರಿಷ್ಕೃತ ವೇಳಾಪಟ್ಟಿಯಂತೆ ನಡೆಸಲಾಗುತ್ತದೆ. ಹಾಗಾಗಿ ಪ್ರವೀಣ ದರ್ಜೆ ಬೆರಳಚ್ಚು, ಶೀಘ್ರಲಿಪಿ, ಬರವಣಿಗೆ ಹಾಗೂ ಮುದ್ರಣ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳು ಕಡ್ಡಾಯವಾಗಿ ಪರಿಷ್ಕೃತ ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಂಡು ಪರೀಕ್ಷೆಗೆ ಹಾಜರಾಗುವುದು. ಒಂದುವೇಳೆ ಅಭ್ಯರ್ಥಿಗಳು ಈ ಹಿಂದೆ ಡೌನ್‌ಲೋಡ್ ಮಾಡಿಕೊಂಡ ಪ್ರವೇಶ ಪತ್ರಗಳನ್ನು ಹಾಜರುಪಡಿಸಿದಲ್ಲಿ ಪರೀಕ್ಷೆಗೆ ಪ್ರವೇಶವನ್ನು ನೀಡಲಾಗುವುದಿಲ್ಲ.

**ಹೆಚ್ಚಿನ ಮಾಹಿತಿಗಾಗಿ ಶ್ರೀ ಸ್ವಾಮಿ, ಸಹಾಯಕ ನಿರ್ದೇಶಕರು ಮತ್ತು ಶಾಖಾಧಿಕಾರಿಗಳು ವಾಣಿಜ್ಯ ವಿಭಾಗ, 4ನೇ ಮಹಡಿ, ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560 003, ಮೊಬೈಲ್ ಸಂಖ್ಯೆ: 9449654687 ಮಂಡಳಿಯ ದೂರವಾಣಿ ಸಂಖ್ಯೆ:080-23360073 ಇ-ಮೇಲ್ ವಿಳಾಸ:** adpisvsection@gmail.com **ಸಂಪರ್ಕಿಸುವುದು. ಅಲ್ಲದೇ ಈ ಸಂಬಂಧ ಏನೇ ದೂರು/ಸಂಶಯಗಳಿದ್ದಲ್ಲಿ ಮಂಡಳಿಯಲ್ಲಿ ಸ್ಥಾಪಿಸಲ್ಪಟ್ಟಿರುವ ಸಹಾಯವಾಣಿ ಸಂಖ್ಯೆ: 080-23360073 ಸಂಪರ್ಕಿಸುವುದು. ಈ ಸಹಾಯವಾಣಿಯು ಬೆಳಿಗ್ಗೆ 10.00 ರಿಂದ ಸಂಜೆ: 5.30 ರವರೆಗೆ ಕಾರ್ಯ ನಿರ್ವಹಿಸುತ್ತದೆ.**

6/7/2021

(ಎಸ್.ಗೀತಾ)
ನಿರ್ದೇಶಕರು,
(ಇತರೆ ಪರೀಕ್ಷೆಗಳು)

ಇವರಿಗೆ:

1. ರಾಜ್ಯದ ಎಲ್ಲಾ ವಾಣಿಜ್ಯ ಸಂಸ್ಥೆಗಳ ಪ್ರಾಂಶುಪಾಲರುಗಳಿಗೆ ಅಗತ್ಯ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಪರೀಕ್ಷಾ ಕೇಂದ್ರಗಳ ಮುಖ್ಯ ಅಧೀಕ್ಷಕರು/ನೋಡಲ್ ಅಧಿಕಾರಗಳಿಗೆ ಅಗತ್ಯ ಕ್ರಮಕ್ಕಾಗಿ.
3. ಶಾಖಾಧಿಕಾರಿಗಳು, ಗಣಕಶಾಖೆ ಇವರಿಗೆ ಈ ಸುತ್ತೋಲೆಯನ್ನು ಅಂತರ್ ಜಾಲದಲ್ಲಿ ಪ್ರಕಟಿಸುವುದು.
4. ಕಛೇರಿ ಪ್ರತಿ.